ಕುವೆಂಪು ವಿಶ್ವವಿದ್ಯಾಲಯ
ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ.
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577451, ಶಿವಮೊಗ್ಗ, ಕರ್ನಾಟಕ.
Phone No: 08282-256166, mob: 7022254993ಇ-ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in
Re-Accredited by NAAC with 'A' Grade, Ranked 73rd Place in NIRF-2019 and Secured 45th Place in SCIMAGO Institutional Rankings

ಸಂಖ್ಯೆ: ಕುವಿ/ಪವಿ/ 281 /2020-21 ದಿನಾಂಕ: 15-04-2021.

## ಪ್ರಕಟಣೆ

ವಿಷಯ: ಮೇ-2021ರಲ್ಲಿ ಜರುಗಲಿರುವ ಎಂ.ಬಿ.ಎ. ಮತ್ತು ಎಂ.ಸಿ.ಎ. ಪದವಿಗಳ ಸೆಮಿಸ್ಟರ್ ಪರೀಕ್ಷೆಗಳ ವೇಳಾಪಟ್ಟಿಗಳನ್ನು ಪ್ರಕಟಿಸುವ ಬಗ್ಗೆ.

*****

ಕುವೆಂಪು ವಿಶ್ವವಿದ್ಯಾಲಯದ ಎಂ.ಬಿ.ಎ. ಪ್ರಥಮ ಸೆಮಿಸ್ಟರ್ (ರೆಗ್ಯುಲರ್) ಮತ್ತು ಪ್ರಥಮ ಸೆಮಿಸ್ಟರ್ (ರಿಪೀಟರ್)ವಿದ್ಯಾರ್ಥಿಗಳಿಗೆ ದಿನಾಂಕ: 04-05-2021ರಿಂದ ಮತ್ತು ಎಂ.ಸಿ.ಎ. ಪ್ರಥಮ ಸೆಮಿಸ್ಟರ್ (ರೆಗ್ಯುಲರ್) ಮತ್ತು ಪ್ರಥಮ ಸೆಮಿಸ್ಟರ್ (ರಿಪೀಟರ್) ವಿದ್ಯಾರ್ಥಿಗಳಿಗೆ ಲಿಖಿತ ಪರೀಕ್ಷೆಗಳು ದಿನಾಂಕ: 17-05-2021ರಿಂದ ಪ್ರಾರಂಭವಾಗಲಿದೆ. ಪರೀಕ್ಷೆಗಳ ಸಾಮಾನ್ಯ ವೇಳಾಪಟ್ಟಿಯನ್ನು ಈ ಪತ್ರಕ್ಕೆ ಲಗತ್ತಿಸಲಾಗಿದೆ.

ಪರೀಕ್ಷೆ ತೆಗೆದುಕೊಳ್ಳಲು ಅರ್ಹರಾದ ವಿವಿಧ ವಿಭಾಗದ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಗಳನ್ನು ಭರ್ತಿಮಾಡಿ ನಿಗದಿತ ದಿನಾಂಕದೊಳಗೆ ಶುಲ್ಕ ಸಂದಾಯ ಮಾಡಿ ವಿಭಾಗಾಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

**ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು:**

| ಕ್ರ. ಸಂ | ವಿವರ | ಎಂ.ಬಿ.ಎ. (ಪ್ರಥಮ ಸೆಮಿಸ್ಟರ್ ರೆಗ್ಯುಲರ್ ಹಾಗೂ ಪ್ರಥಮ ಸೆಮಿಸ್ಟರ್ ರಿಪೀಟರ್) | ಎಂ.ಸಿ.ಎ. (ಪ್ರಥಮ ಸೆಮಿಸ್ಟರ್ ರೆಗ್ಯುಲರ್ ಹಾಗೂ ಪ್ರಥಮ ಸೆಮಿಸ್ಟರ್ ರಿಪೀಟರ್) |
|---|---|---|---|
| 1 | ವಿಳಂಬ ಶುಲ್ಕವಿಲ್ಲದೆ | 17-04-2021 ರಿಂದ 24-04-2021 ರವರೆಗೆ | 17-04-2021 ರಿಂದ 06-05-2021 ರವರೆಗೆ |
| 2 | ವಿಳಂಬ ಶುಲ್ಕ ರೂ. 100=00ರಂತೆ | 25-04-2021 ರಿಂದ 26-04-2021 ರವರೆಗೆ | 07-05-2021 ರಿಂದ 08-05-2021 ರವರೆಗೆ |
| 3 | ವಿಳಂಬ ಶುಲ್ಕ ರೂ. 500=00ರಂತೆ | 27-04-2021 ರಿಂದ28-04-2021 ರವರೆಗೆ | 09-05-2021 ರಿಂದ 10-05-2021 ರವರೆಗೆ |

**ಸ್ನಾತಕೋತ್ತರ ಸೆಮಿಸ್ಟರ್ ಸ್ಕೀಂ ಪರೀಕ್ಷೆಗಳು (ವೃತ್ತಿಪರ ವಿದ್ಯಾರ್ಥಿಗಳಿಗೆ ಮಾತ್ರ) [M.B.A / M.C.A]**

| | | ಪರೀಕ್ಷಾ ಶುಲ್ಕ | ಅಂಕಪಟ್ಟಿ ಶುಲ್ಕ | ಒಟ್ಟು |
|---|---|---|---|---|
| 1. | ಸೆಮಿಸ್ಟರ್‌ನ ಪೂರ್ಣ ಪರೀಕ್ಷೆಗೆ | ರೂ.1780/- | ರೂ.200/- | ರೂ.1980/- |
| 2. | ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಸೈದ್ಧಾಂತಿಕ) (ಪ್ರತಿ ಸೆಮಿಸ್ಟರ್‌ಗೆ ಪ್ರತ್ಯೇಕವಾಗಿ) ರಿಪೀಟರ್ ವಿದ್ಯಾರ್ಥಿಗಳಿಗೆ | ರೂ.350/- | ರೂ.200/- | ರೂ.550/- |
| 3. | ಪ್ರಥಮ ಸೆಮಿಸ್ಟರ್‌ನ ಒಂದು ಪ್ರಾಕ್ಟಿಕಲ್ ಪರೀಕ್ಷೆಗೆ (ಎಂ.ಸಿ.ಎ.ವಿದ್ಯಾರ್ಥಿಗಳಿಗೆ) | ರೂ.350/- | ರೂ.200/- | ರೂ.550/- |

. . . . . .2

## ವಿದ್ಯಾರ್ಥಿಗಳಿಗೆ ಸೂಚನೆ

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು www.kuvempu.ac.in ನಲ್ಲಿ student portalಗೆ login ಆಗಿ ನೊಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ನೆಟ್ ಬ್ಯಾಂಕಿಂಗ್‌ನಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ವಿಭಾಗ / ಕಾಲೇಜುಗಳಲ್ಲಿ ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card/Credit Card/Online Banking/Paytm wallet ಮೂಲಕ ನೇರವಾಗಿ ಹಣಪಾವತಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಆಯಾ ವಿಭಾಗ / ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯಮಾಡಲಾಗುವುದಿಲ್ಲ.

- **ವಿಶೇಷ ಸೂಚನೆ:**

  **ವಿದ್ಯಾರ್ಥಿಗಳು Internet Browsing Center ನ ಮಾಲೀಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.**

ಅ. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 200/-ನ್ನು ಪಾವತಿಸಬೇಕು.

ಆ. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಇ. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ F&R ಖಾತೆ ಸಂಖ್ಯೆ- 54023036246ಕ್ಕೆ ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳತಕ್ಕದ್ದು.

ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ಪ್ರವರ್ಗ-1ಕ್ಕೆ 2.5ಲಕ್ಷ ಹಾಗೂ ಪ್ರವರ್ಗ 2ಎ, 2ಬಿ, 3ಎ, 3ಬಿ ಮತ್ತು ಇತರೆ ವರ್ಗಕ್ಕೆ ರೂ. 1 ಲಕ್ಷ ಗರಿಷ್ಟ ಮಿತಿ ನಿಗದಿಪಡಿಸಿರುವ ಹಿನ್ನೆಲೆಯಲ್ಲಿ ಕುಟುಂಬದ ವಾರ್ಷಿಕ ಆದಾಯದ ಈ ಗರಿಷ್ಟ ಮಿತಿಯನ್ನು ಮೀರಿದ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ.

. . . . .3

3. <u>ಪರಿಶಿಷ್ಟಜಾತಿ:ಪರಿಶಿಷ್ಟಪಂಗಡ ಹಾಗೂ ಮೇಲ್ಕಂಡ ಮೀಸಲಾತಿಗೆ ಒಳಪಡುವ ವರ್ಗಗಳ ಮರುಯತ್ನದ **(Repeaters)** ವಿದ್ಯಾರ್ಥಿಗಳಿಗೆ ಹಾಗೂ ವಿಳಂಬ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯ್ತಿ ಇರುವುದಿಲ್ಲ.</u>
4. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ವಿಭಾಗ / ಕಾಲೇಜಿಗೆ ಒಪ್ಪಿಸಬೇಕು.
5. ವಿದ್ಯಾರ್ಥಿಗಳು ಪರೀಕ್ಷೆ ಕಟ್ಟುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡುವುದಿಲ್ಲ.
6. ಈಗಾಗಲೇ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.

## <u>ವಿಭಾಗದ ಮುಖ್ಯಸ್ಥರು / ಪ್ರಾಚಾರ್ಯರಿಗೆ ಸೂಚನೆಗಳು</u>

1. **ಪರೀಕ್ಷಾ ಅರ್ಜಿ / ಶುಲ್ಕ ಪಾವತಿಸುವ ಮಾಹಿತಿಯು ಪ್ರತಿಯೊಬ್ಬ ವಿದ್ಯಾರ್ಥಿಗೂ ತಲುಪುವಂತೆ ಆಯಾ ವಿಭಾಗಧ್ಯಕ್ಷರು/ಕಾಲೇಜು ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.**
2. ನಿಯಮಾನುಸಾರ ಅರ್ಹರಾದ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು. ಹಾಗೂ <u>**ಒಂದು ಪ್ರತಿಯನ್ನು ವಿಭಾಗದಲ್ಲಿ ಮಾಹಿತಿಗಾಗಿ ಸಂರಕ್ಷಿಸಿಕೊಳ್ಳುವುದು.**</u>
3. ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ ವಿದ್ಯಾರ್ಥಿಗಳು / ಮುಂದಿನ ಸೆಮಿಸ್ಟರ್‌ಗೆ ಅರ್ಹತೆಯಿಲ್ಲದೆ ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ / ಪರೀಕ್ಷೆಯನ್ನು ವಿಭಾಗ / ಕಾಲೇಜು ಮಟ್ಟದಲ್ಲಿ ಬರೆಯಲು ಅನುಮತಿಸಿದಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ವಿಭಾಗದ ಮುಖ್ಯಸ್ಥರು / ಕಾಲೇಜಿನ ಪ್ರಾಚಾರ್ಯರೇ ನೇರ ಜವಾಬ್ದಾರರಾಗಿರುತ್ತಾರೆ.
4. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 200/–ನ್ನು ಪಾವತಿಸಬೇಕು.
5. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

- ವಿಶೇಷ ಸೂಚನೆ:

6. **ಶುಲ್ಕ ವಿನಾಯಿತಿ ಅರ್ಹತೆ ಹೊಂದಿರುವ ಎಲ್ಲಾ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ನೈಜತೆಯಿದ್ದಲ್ಲಿ ಮಾತ್ರವೇ OASISನಲ್ಲಿ college log in ಆಗಿ Utility ಯಲ್ಲಿನ Confirm Category option ನಲ್ಲಿ Fee typeಗೆ Low income ಎಂದು ನಮೂದಿಸಬೇಕು. ಇಲ್ಲವಾದಲ್ಲಿ online ನಲ್ಲಿ ವಿದ್ಯಾರ್ಥಿಗಳು ಪೂರ್ಣ ಶುಲ್ಕ ಪಾವತಿಸಬೇಕಾಗುತ್ತದೆ.**

7. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ವಿಭಾಗಾಧ್ಯಕ್ಷರು / ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ F&R ಖಾತೆ ಸಂಖ್ಯೆ- 54023036246ಕ್ಕೆ ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ವಸೂಲು ಮಾಡಿ ಮಾಹಿತಿಯನ್ನು (Hard Copy)ಯಲ್ಲಿ ಪರೀಕ್ಷಾ ವಿಭಾಗದ ಲೆಕ್ಕಶಾಖೆಗೆ ಸಲ್ಲಿಸುವುದು.

8. ಪ್ರಾಯೋಗಿಕ / ಸೈದ್ಧಾಂತಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ, ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಗ್ರಿಗಳ ಬೇಡಿಕೆ ಪಟ್ಟಿಗಳನ್ನು **ದಿನಾಂಕ: 22-04-2021 ರೊಳಗಾಗಿ ಶಾಖಾಧಿಕಾರಿಗಳು, ಲೆಕ್ಕಶಾಖೆ, ಪರೀಕ್ಷಾ ವಿಭಾಗ ಇವರಿಗೆ ತಲುಪಿಸಲು ಸೂಚಿಸಿದೆ.**

9. ಪ್ರಶ್ನೆ ಪತ್ರಿಕೆಗಳ ಬೇಡಿಕೆಯನ್ನು **ದಿನಾಂಕ: 20-04-2021 ರೊಳಗಾಗಿ ಡಾ. ಬಿ. ಜೆ. ಗಿರೀಶ್, ಉಪಕುಲಸಚಿವ (ಪರೀಕ್ಷಾಂಗ) ಇವರಿಗೆ ತಲುಪಿಸಲು ಸೂಚಿಸಿದೆ.**

10. **ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು, ಆನ್‌ಲೈನ್ ಮೂಲಕ ನಮೂದಿಸಿ ನಂತರ Freeze ಮಾಡಬೇಕು.**

11. **ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ, ಯಾವುದೇ ತೊಂದರೆಗಳಿದ್ದಲ್ಲಿ ಅದನ್ನು ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕ್ಕೆ ಮುಂಚೆ ಬಗೆಹರಿಸಿಕೊಳ್ಳಬೇಕು. ಹಾಗೂ (ಪ್ರಥಮ ಸೆಮಿಸ್ಟರ್ ಎಂ.ಬಿ.ಎ.ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ದಿನಾಂಕ: 30-04-2021ರೊಳಗೆ ಮತ್ತು ಪ್ರಥಮ ಸೆಮಿಸ್ಟರ್ ಎಂ.ಸಿ.ಎ. ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ದಿ: 13-05-2021ರೊಳಗೆ ಆನ್‌ಲೈನ್‌ನಲ್ಲಿ ದಾಖಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ** ಆಂತರಿಕ ಅಂಕಗಳನ್ನು ದಾಖಲಿಸಲು **ಅನುಮತಿಸಲಾಗುವುದಿಲ್ಲ.** ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಿಯಮಾನುಸಾರ onlineನಲ್ಲಿ ದಾಖಲಿಸದೇ ಬಿಟ್ಟು ಹೋದಲ್ಲಿ ಅಯಾ ವಿಭಾಗದ/ ಕಾಲೇಜಿನ ಮುಖ್ಯಸ್ಥರೇ ಜವಾಬ್ದಾರರಾಗಿರುತ್ತಾರೆ.

12. ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳಿಂದ ಪರೀಕ್ಷೆಗಳಿಗೆ ಅರ್ಜಿಯನ್ನು ಸ್ವೀಕರಿಸಬಾರದು, ಮತ್ತು ಅಂತಹ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಕೂಡ ನಡೆಸಬಾರದು. ಅಂತಹ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿ ಸ್ವೀಕರಿಸಿದಲ್ಲಿ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು / ಕಾಲೇಜಿನ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ.

13. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿರುವಂತಹ (ಕಾಲೇಜು ಮತ್ತು ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಿ) ವಿಭಾಗ / ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದೊಳಗೆ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

14. ಸ್ನಾತಕ ಪದವಿಯ ಆಂತರಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ಸ್ನಾತಕೋತ್ತರ ವಿದ್ಯಾರ್ಥಿಗಳ ಆಂತರಿಕ ಪರೀಕ್ಷೆಗಳಿಗೆ ಉಪಯೋಗಿಸಬಾರದು.

**15. ಕರ್ನಾಟಕ ಘನ ಸರ್ಕಾರವು ಹೊರಡಿಸಿರುವ ಸುತ್ತೋಲೆ ಸಂಖ್ಯೆ:HFW:30ACS2021Date:02-02-2021ರಲ್ಲಿ ಸೂಚಿಸಿರುವ ಕೋವಿಡ್-19ರ ಮಾರ್ಗದರ್ಶಿ ಸೂತ್ರಗಳನ್ನು ಚಾಚೂ ತಪ್ಪದೇ ಪಾಲಿಸತಕ್ಕದ್ದು.**

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
15/04/21 ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ - 577 451.

*ಇವರಿಗೆ,*

01. ಅಧ್ಯಕ್ಷರು , ಸ್ನಾತಕೋತ್ತರ ವಾಣಿಜ್ಯ ನಿರ್ವಹಣಾ ಶಾಸ್ತ್ರ ವಿಭಾಗ, ಕುವೆಂಪು ವಿಶ್ವವಿದ್ಯಾಲಯ,ಜ್ಞಾನಸಹ್ಯಾದ್ರಿ, ಶಂಕರಘಟ್ಟ
02. ಅಧ್ಯಕ್ಷರು , ಎಂ.ಸಿ.ಎ. ಅಧ್ಯಯನ ವಿಭಾಗ, ಕುವೆಂಪು ವಿಶ್ವವಿದ್ಯಾಲಯ,ಜ್ಞಾನಸಹ್ಯಾದ್ರಿ, ಶಂಕರಘಟ್ಟ
03. ಪ್ರಾಂಶುಪಾಲರು, ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಶಿವಮೊಗ್ಗ.
04. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
05. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
06. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
07. ಆಪ್ತಶಾಖೆ, ಮಾನ್ಯಕುಲಪತಿಗಳು, ಕುಲಸಚಿವ(ಆಡಳಿತ), ಕುಲಸಚಿವ(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
08. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಶೇಷಾದ್ರಿಪುರಂ ರಸ್ತೆ, ಬೆಂಗಳೂರು.
09. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
10. ಸಂಚಾಲಕರು, ಎಸ್.ಸಿ/ಎಸ್.ಟಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
11. ಸಂಚಾಲಕರು, ಓ.ಬಿ.ಸಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
12. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
13. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
14. ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
15. ಮೆ॥ ಲಾಜಿಸಸ್, @ ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
16. ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
17. ಕಛೇರಿ ಪ್ರತಿ.

# ಕುವೆಂಪು ವಿಶ್ವವಿದ್ಯಾಲಯ

ಮೇ–2021ರಲ್ಲಿ ನಡೆಯಲಿರುವ ಎಂ.ಬಿ.ಎ. (ಸಿ.ಬಿ.ಸಿ.ಎಸ್.ಸ್ಕೀಂ) ಸೆಮಿಸ್ಟರ್ ಪರೀಕ್ಷಾ ವೇಳಾಪಟ್ಟಿ

| ಪತ್ರಿಕೆಗಳು | ಪ್ರಥಮ ಸೆಮಿಸ್ಟರ್ (ರೆಗ್ಯುಲರ್ ಮತ್ತು ರಿಪೀಟರ್)<br>Time: 10.00am to 1.00pm |
|---|---|
| ಪತ್ರಿಕೆ–1 | 04–05–2021 ಮಂಗಳವಾರ |
| ಪತ್ರಿಕೆ–2 | 06–05–2021 ಗುರುವಾರ |
| ಪತ್ರಿಕೆ–3 | 10–05–2021 ಸೋಮವಾರ |
| ಪತ್ರಿಕೆ–4 | 12–05–2021 ಬುಧವಾರ |
| ಪತ್ರಿಕೆ–5 | 15–05–2021 ಶನಿವಾರ |
| ಪತ್ರಿಕೆ–6 | 17–05–2021 ಸೋಮವಾರ |
| ಪತ್ರಿಕೆ–7 | 19–05–2021 ಬುಧವಾರ |

ಸೂಚನೆಗಳು:

1. ನಿಯಮಾನುಸಾರ ಶೇಕಡ 75% ಹಾಜರಾತಿಯು ಕಡ್ಡಾಯವಾಗಿದ್ದು, ಶೇಕಡ 75%ರ ಹಾಜರಾತಿಯನ್ನು ಹೊಂದಿರುವ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆಗೆ ಹಾಜರಾಗಲು/ಬರೆಯಲು ಅವಕಾಶವಿರುತ್ತದೆ. ಇದನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

2. ಮೇಲ್ಕಂಡ ವೇಳಾಪಟ್ಟಿಯಲ್ಲಿ ತಿಳಿಸಿರುವ ಸೈದ್ಧಾಂತಿಕ ಪತ್ರಿಕೆಗಳ ಶೀರ್ಷಿಕೆಯನ್ನು (Subject Tittle)ಈ ಕಛೇರಿಗೆ ಸಲ್ಲಿಸಿ ಅನುಮೋದನೆ ಪಡೆಯಲು ತಿಳಿಸಲಾಗಿದೆ.

ಕುಲಸಚಿವರು (ಪರೀಕ್ಷಾಂಗ) 15/4.

ಕುಲಸಚಿವರು (ಪರೀಕ್ಷಾಂಗ)
15/04/21 ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ–577 451.

# ಕುವೆಂಪು ವಿಶ್ವವಿದ್ಯಾಲಯ

## ಮೇ–2021ರಲ್ಲಿ ನಡೆಯಲಿರುವ ಎಂ.ಸಿ.ಎ. (ಸಿ.ಬಿ.ಸಿ.ಎಸ್.ಸ್ಕೀಂ) ಸೆಮಿಸ್ಟರ್ ಪರೀಕ್ಷಾ ವೇಳಾಪಟ್ಟಿ

| ಪತ್ರಿಕೆಗಳು | ಪ್ರಥಮ ಸೆಮಿಸ್ಟರ್ (ರೆಗ್ಯುಲರ್ ಮತ್ತು ರಿಪೀಟರ್)<br>Time: 10.00am to 1.00pm |
|---|---|
| ಪತ್ರಿಕೆ–1 | 17–05–2021 ಸೋಮವಾರ |
| ಪತ್ರಿಕೆ–2 | 19–05–2021 ಬುಧವಾರ |
| ಪತ್ರಿಕೆ–3 | 21–05–2021 ಶುಕ್ರವಾರ |
| ಪತ್ರಿಕೆ–4 | 24–05–2021 ಸೋಮವಾರ |
| ಪತ್ರಿಕೆ–5 | 26–05–2021 ಬುಧವಾರ |
| ಪತ್ರಿಕೆ–6 | 28–05–2021 ಶುಕ್ರವಾರ |
| ಪತ್ರಿಕೆ–7 | 31–05–2021 ಸೋಮವಾರ |

ಸೂಚನೆಗಳು:

1. ಪ್ರಾಯೋಗಿಕ ಪರೀಕ್ಷೆಗಳನ್ನು ಸೈದ್ಧಾಂತಿಕ ಪರೀಕ್ಷೆಗಳು ಪ್ರಾರಂಭವಾಗುವ ಮೊದಲು ಮುಕ್ತಾಯವಾಗುವಂತೆ ವ್ಯವಸ್ಥೆ ಮಾಡಬೇಕು.
2. ಪ್ರಾಯೋಗಿಕ ಪರೀಕ್ಷೆಯ ದಿನಾಂಕ ಮತ್ತು ತಂಡ ಇತ್ಯಾದಿಗಳನ್ನು ಸಂಬಂಧಪಟ್ಟ ವಿಭಾಗಗಳಿಂದ ಪಡೆದುಕೊಳ್ಳತಕ್ಕದ್ದು.
3. ನಿಯಮಾನುಸಾರ ಶೇಕಡ 75% ಹಾಜರಾತಿಯು ಕಡ್ಡಾಯವಾಗಿದ್ದು, ಶೇಕಡ 75%ರ ಹಾಜರಾತಿಯನ್ನು ಹೊಂದಿರುವ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆಗೆ ಹಾಜರಾಗಲು/ಬರೆಯಲು ಅವಕಾಶವಿರುತ್ತದೆ. ಇದನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.
4. ಮೇಲ್ಕಂಡ ವೇಳಾಪಟ್ಟಿಯಲ್ಲಿ ತಿಳಿಸಿರುವ ಸೈದ್ಧಾಂತಿಕ ಪತ್ರಿಕೆ ಶೀರ್ಷಿಕೆಯನ್ನು (Subject Tittle)ಈ ಕಛೇರಿಗೆ ಸಲ್ಲಿಸಿ ಅನುಮೋದನೆ ಪಡೆಯಲು ತಿಳಿಸಲಾಗಿದೆ.

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ),
ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ–577 451.

15/04/21